O.S. 107/2014
P.W.1

<u>ಸಾಕ್ಷಿಯನ್ನು ದಿನಾಂಕಃ 30-05-2019 ರಂದು ಕರೆಯಿಸಿ ಪ್ರಮಾಣ ವಚನ ನೀಡಲಾಯಿತು.</u>

<u>ಮುಂದುವರೆದ ಮುಖ್ಯ ವಿಚಾರಣೆ ವಾದಿ ಪರ ವಕೀಲರಾದ ಶ್ರೀ ಓ.ಟಿ. ರವರಿಂದಃ</u>

ನನ್ನ ಮುಖ್ಯ ವಿಚಾರಣೆಯ ಬದಲಾಗಿ ಸಲ್ಲಿಸಿರುವ ಪ್ರಮಾಣಪತ್ರದಲ್ಲಿನ ವಿಷಯಗಳೆಲ್ಲವು ಸತ್ಯವಾಗಿರುತ್ತದೆ..

ನಾನು ಸಲ್ಲಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಎರಡು ಗಣಕೀಕೃತ ಪಹಣಿ ಪತ್ರಿಕೆಗಳ ದೃಢೀಕೃತ ನಕಲುಗಳು ಮತ್ತು ಎರಡು ಕೈ ಬರವಣಿಗೆಯ ಪಹಣಿ ಪತ್ರಿಕೆಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 1 ರಿಂದ 4 ಎಂದು , ದಿಃ 30-04-2014 ರಂದು ಚಿಗಟೇರಿ ಪೋಲಿಸ್ ಠಾಣೆಗೆ ನೀಡಿದ ದೂರಿನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು , ಅಂಚೆ ರಶೀದಿಯನ್ನು ನಿಪಿ 6 ಎಂದು ಗುರುತಿಸಲಾಯಿತು.

2. 1990 ನೇ ಇಸವಿಯಲ್ಲಿ ನೋಂದಾಯಿತವಲ್ಲದ ಪಾಲುವಿಭಾಗವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ಗುರುತಿಸಲು 4 ಮತ್ತು 5 ನೇ ಪ್ರತಿವಾದಿಯರ ಪರ ವಕೀಲರಾದ ಶ್ರೀ ಕೆ.ಪಿ.ರವರು ತಕರಾರು ಮಾಡಿದ್ದು, ಸದರಿ ದಾಖಲೆಯು ನೋಂದಾಯಿತವಾಗಿಲ್ಲದಿರುವುದರಿಂದ ನಿಶಾನೆಯಾಗಿ ಗುರುತಿಸಲು ಬರುವುದಿಲ್ಲವೆಂದು ತಿಳಿಸಿರುತ್ತಾರೆ.

ವಾದಿಯ ಪರ ವಕೀಲರು ಸದರಿ ದಾಖಲೆಯ ಬಗ್ಗೆ ವಾದವನ್ನು ಮಂಡಿಸಲು ಕಾಲಾವಕಾಶ ಕೋರಿದ್ದು ನೀಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಿದೆ.

ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ. ಹರಪನಹಳ್ಳಿ